# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪   ಫ್ಯಾಕ್ಸ್ : ೨೬೫೨೩೮೬೭
http://www.kasapa.in   e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೬-೦೭-೨೦೨೩

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ‘ಕನ್ನಡ ಚಳುವಳಿ ವೀರಸೇನಾನಿ ಮ. ರಾಮಮೂರ್ತಿ ದತ್ತಿ ಪ್ರಶಸ್ತಿ’ ಗೆ ಕಲಾವಿದ, ಕನ್ನಡ ಹೋರಾಟಗಾರ ಜಿ.ಕೆ. ಸತ್ಯ ಆಯ್ಕೆ

ಬೆಂಗಳೂರು: **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ** ಅವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿ ಸಭೆಯಲ್ಲಿ ೨೦೨೩ನೆಯ ಸಾಲಿನ **‘ಕನ್ನಡ ಚಳುವಳಿ ವೀರಸೇನಾನಿ ಮ.ರಾಮಮೂರ್ತಿ ದತ್ತಿ’** ಪ್ರಶಸ್ತಿಗೆ ಕನ್ನಡ ಪರ ಹೋರಾಟಗಾರ ಹಿರಿಯ ಕಲಾವಿದರಾದ **ಶ್ರೀ ಜಿ.ಕೆ. ಸತ್ಯ** ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟಿಸಿದೆ.

**ಶ್ರೀ ಟಿ. ತಿಮ್ಮೇಶ್** ಅವರು ಬೆಂಗಳೂರು ನಗರ ಜಿಲ್ಲಾ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರಾಗಿದ್ದಾಗ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸ್ಥಾಪಿಸಿರುವ **‘ಕನ್ನಡ ಚಳುವಳಿ ವೀರಸೇನಾನಿ ಮ.ರಾಮಮೂರ್ತಿ ದತ್ತಿ’** ಪ್ರಶಸ್ತಿಯು ೧೦,೦೦೦ (ಹತ್ತು ಸಾವಿರ)ರೂ. ನಗದು, ಸ್ಮರಣಿಕೆ ಹಾಗೂ ಫಲ ತಾಂಬೂಲಗಳನ್ನೂ ಒಳಗೊಂಡಿರುತ್ತದೆ. ಕನ್ನಡ ಚಳುವಳಿ ಸೇನಾನಿ ಶ್ರೀ ಮ. ರಾಮಮೂರ್ತಿ ಅವರು ರಾಜ್ಯಾದ್ಯಂತ ಕನ್ನಡ ಉಳಿಸಿ ಬೆಳೆಸುವ ಹಿನ್ನೆಲೆಯಲ್ಲಿ ನಾಡಿನಾದ್ಯಂತ ಹೋರಾಟಕ್ಕೆ ಶಕ್ತಿ ಮತ್ತು ಚೈತನ್ಯವನ್ನು ತುಂಬಿದವರು. ಇವರ ಹೆಸರಿನಲ್ಲಿರುವ ಈ ದತ್ತಿ ಪ್ರಶಸ್ತಿಯನ್ನು ರಾಜ್ಯದಲ್ಲಿ ಕನ್ನಡದ ಹೋರಾಟದಲ್ಲಿ ತೊಡಗಿಸಿಕೊಂಡಿರುವ ೫೦ ವರ್ಷ ಮೀರಿದ ವಯೋಮಾನದ ಕನ್ನಡ ಕಾರ್ಯಕರ್ತರಿಗೆ ಈ ಪ್ರಶಸ್ತಿ ನೀಡತಕ್ಕದ್ದು ಎಂಬುವುದು **ಕನ್ನಡ ಚಳುವಳಿ ವೀರಸೇನಾನಿ ಮ.ರಾಮಮೂರ್ತಿ ದತ್ತಿ’** ಪ್ರಶಸ್ತಿಯ ಆಶಯವಾಗಿದೆ. ಇದುವರೆಗೆ ೮ ಜನ ಕನ್ನಡ ಚಳುವಳಿಗಾರರಿಗೆ ಈ ಪ್ರಶಸ್ತಿ ಪ್ರದಾನ ಮಾಡಲಾಗಿದೆ. **೨೦೨೩ನೆಯ ಸಾಲಿನ ಕನ್ನಡ ಚಳುವಳಿ ವೀರಸೇನಾನಿ ಮ.ರಾಮಮೂರ್ತಿ ದತ್ತಿ’** ಪ್ರಶಸ್ತಿಗಾಗಿ ಕನ್ನಡ ಪರ ಹೋರಾಟಗಾರ ಹಿರಿಯ ಕಲಾವಿದರಾದ **ಶ್ರೀ ಜಿ.ಕೆ. ಸತ್ಯ** ಅವರು ಆಯ್ಕೆಯಾಗಿದ್ದಾರೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ದತ್ತಿ ಆಯ್ಕೆ ಸಮಿತಿಯ ಅಧ್ಯಕ್ಷತೆ ವಹಿಸಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ಮಾಧ್ಯಮಗಳೊಂದಿಗೆ ಮಾತನಾಡಿ ಪ್ರಸ್ತುತ ದತ್ತಿ ಪ್ರಶಸ್ತಿಗೆ ಆಯ್ಕೆಯಾಗಿರುವ **ಶ್ರೀ ಜಿ.ಕೆ. ಸತ್ಯ** ಕನ್ನಡದ ಅತ್ಯಂತ ಜನಪ್ರಿಯ ವರ್ಣಚಿತ್ರಕಾರರು. ಅವರು ಚಿತ್ರಕಲೆಗೆ ಸೀಮಿತವಾಗದೆ ಕನ್ನಡ ಹೋರಾಟಗಳಲ್ಲಿ ಅತ್ಯಂತ ಕ್ರಿಯಾಶೀಲವಾಗಿ ತೊಡಗಿಸಿಕೊಂಡವರು. ಕನ್ನಡ ಚಳುವಳಿಗಾರರಾದ ಅ.ನ.ಕೃ, ಮ.ರಾಮಮೂರ್ತಿ, ನಾಡಿಗೇರರು ಮೊದಲಾದವರ ನಿಕಟ ಒಡನಾಡಿಯಾಗಿದ್ದ ಅವರು ಗೋಕಾಕ್ ಚಳುವಳಿ ಅನುಷ್ಠಾನಕ್ಕೆ ಹೋರಾಡಿದ ಪ್ರಮುಖ ನೇತಾರರಲ್ಲಿ ಒಬ್ಬರು. ಕನ್ನಡ ಶಕ್ತಿ ಕೇಂದ್ರದ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿಗಳೂ ಆಗಿದ್ದರು. ಸದಾ ಕನ್ನಡ, ಕನ್ನಡಿಗ, ಕರ್ನಾಟಕದ ಹಿತರಕ್ಷಣೆಗೆ ಹೋರಾಡುತ್ತಾ ಬಂದಿರುವ ಸತ್ಯ ಅವರನ್ನು ಕನ್ನಡ ಸಾಹಿತ್ಯ ಪರಿಷತ್ತು ಅಭಿನಂದಿಸುತ್ತಿದೆ ಎಂದು **ನಾಡೋಜ. ಡಾ.ಮಹೇಶ ಜೋಶಿ** ತಿಳಿಸಿದ್ದಾರೆ.

**ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿಯ ಸಭೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಬೆಂಗಳೂರು ನಗರ ಮಾಜಿ ಜಿಲ್ಲಾಧ್ಯಕ್ಷರಾದ ಶ್ರೀ ಟಿ.ತಿಮ್ಮೇಶ್, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಡಾ. ಪದ್ಮಿನಿ ನಾಗರಾಜು ಹಾಗೂ ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಂ.ಪಟೇಲ್ ಪಾಂಡು** ಅವರು ಉಪಸ್ಥಿತರಿದ್ದರು.

**ಛಾಯಾಚಿತ್ರ:** ಜಿ.ಕೆ. ಸತ್ಯ

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು